ಅ) ಬೆಂಗಳೂರಿನ ಖಾಸಗಿ ಆಂಗ್ಲ ಮಾಧ್ಯಮ ಶಾಲೆಗಳು ಇತ್ತೀಚೆಗೆ ರಾಜ್ಯ ಪಠ್ಯಕ್ರಮವನ್ನು ತೆಗೆದುಹಾಕಿ, ಕೇಂದ್ರೀಯ ಪಠ್ಯಕ್ರಮ ವ್ಯವಸ್ಥೆಯನ್ನು (I.C.S.E. ಮತ್ತು C.B.S.C. Syllabus) ಅಳವಡಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಇ) ಹಾಗಿದ್ದಲ್ಲಿ, ಇಂತಹ ಶಾಲೆಗಳ ನಿಯಂತ್ರಣ ಮಾಡಲು ರಾಜ್ಯ ಸರ್ಕಾರ ಕೈಗೊಳ್ಳುವ ಕ್ರಮವೇನು ?

ಶ್ರೀ ವಿಶ್ವೇಶ್ವರ ಹೆಗ್ಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಬಂದಿರುವುದಿಲ್ಲ.

ಇ) ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಡೊನೇಷನ್ ಹಾವಳಿಯನ್ನು ತಪ್ಪಿಸಲು ಕರ್ನಾಟಕ ಶಿಕ್ಷಣ ಕಾಯ್ದೆ ಕರ್ನಾಟಕ ಶಿಕ್ಷಣ ಸಂಸ್ಥೆಗಳು (Classification, Regulation Etc.,) ನಿಯಮಗಳು 1995ರ ನಿಯಮ 16 ರಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ 117 ಪಿಜಿಸಿ 2003, ದಿನಾಂಕಃ 28-4-2003 ರನ್ವಯ ಸಮಿತಿಯನ್ನು ರಚಿಸಿದ್ದು, ಯಾವುದೇ ಸಂಸ್ಥೆಯು ನಿಯಮಬಾಹಿರವಾಗಿ ವಂತಿಗೆಯನ್ನು ವಸೂಲಿ ಮಾಡಿದಲ್ಲಿ ಬಾದಿತ ಪೋಷಕರು ಸದರಿ ಸಮಿತಿಯು ಮುಂದೆ ದೂರನ್ನು ಲಿಖಿತ ದೂರು ದಾಖಲಿಸಿದಲ್ಲಿ, ಅದನ್ನು ಪರಿಶೀಲಿಸಿ, ಜಿಲ್ಲಾಧಿಕಾರಿಗಳು ಸೂಕ್ತ ಕ್ರಮವಹಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

ಬಿಜಾಪುರದಲ್ಲಿ ಬಸವೇಶ್ವರ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯ

183(1076) ಶ್ರೀ ಅಪ್ಪುಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣ ಶೆಟ್ಟಿ (ಬಿಜಾಪುರ ನಗರ) : ಮಾನ್ಯ ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಭಕ್ತಿ ಭಂಡಾರಿ, ಕ್ರಾಂತಿಯೋಗಿ, ಜಗಜ್ಯೋತಿ ಬಸವೇಶ್ವರ ಬಿಜಾಪುರ ಜಿಲ್ಲೆಯಲ್ಲಿ ಹುಟ್ಟಿ ಅಂತರರಾಷ್ಟ್ರೀಯ ಪ್ರಖ್ಯಾತಿಗಳಿಸಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ ?

ಆ) ಬಸವೇಶ್ವರರ ತತ್ವ ಆದರ್ಶಗಳು, ಸಿದ್ಧಾಂತಗಳನ್ನು ಯುವ ಜನಾಂಗಕ್ಕೆ ಪ್ರಚುರಪಡಿಸುವ ಸಲುವಾಗಿ ಬಸವೇಶ್ವರ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಇ) ಹಾಗಿದ್ದಲ್ಲಿ, ಬಸವಣ್ಣನವರು ಜನಿಸಿದ ಬಿಜಾಪುರ ಜಿಲ್ಲೆಯಲ್ಲಿ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಆಸಕ್ತಿವಹಿಸುವುದೇ ?

ಈ) ಬಸವೇಶ್ವರರ ವಿಶ್ವವಿದ್ಯಾಲಯವನ್ನು ಎಲ್ಲಿ ಸ್ಥಾಪಿಸಲಾಗುವುದು ? ಅದರ ರೂಪುರೇಷೆಗಳೇನು ?

ಉ) ಈ ಹೊಸ ವಿಶ್ವವಿದ್ಯಾಲಯವನ್ನು ಯಾವಾಗ ಸ್ಥಾಪಿಸಲಾಗುವುದು ; ಅದಕ್ಕಾಗಿ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

ಡಾ. ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) :

ಅ) ಬಂದಿದೆ.

ಆ) 2011–12ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಬಸವ ಅಂತರರಾಷ್ಟ್ರೀಯ ಕೇಂದ್ರವನ್ನು ಸ್ಥಾಪಿಸುವ ಉದ್ದೇಶಕ್ಕಾಗಿ 25 ಕೋಟಿ ರೂ.ಗಳನ್ನು ರಾಜ್ಯ ಸರ್ಕಾರವು ಒದಗಿಸಲಿದೆ ಎಂದು ತಿಳಿಸಿರುತ್ತಾರೆ.

ಉದ್ಯೋಗ ಖಾತ್ರಿ ಯೋಜನೆಯ ಕಾಮಗಾರಿಗಳ ಹಣ ಪಾವತಿ

ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ (ಅಫ್ಜಲ್‌ಪುರ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ಸುವರ್ಣ ಗ್ರಾಮ ಯೋಜನೆ ಅಡಿಯಲ್ಲಿ ಆಯ್ಕೆಯಾದ ಗ್ರಾಮಗಳಲ್ಲಿ ಕಾಮಗಾರಿಗಳು ನಿಧಾನ ಗತಿಯಲ್ಲಿ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;